ಬೀಚ್ ಮತ್ತು ಪ್ರವಾಸಿ ಕೇಂದ್ರಗಳ ಅಭಿವೃದ್ಧಿ

4 (175) ಶ್ರೀ ಖಾದರ್ .ಯು.ಟಿ (ಮಂಗಳೂರು) ಮಾನ್ಯ ವಿಧಾನ ಸಭೆಯ ಸದಸ್ಯರು:– ಮಾನ್ಯ ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಹಾಗೂ ಯುವಜನ ಸೇವೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ರಾಜ್ಯದಲ್ಲಿರುವ "ಬೀಚ್ ಮತ್ತು ಪ್ರವಾಸಿ' ಕೇಂದ್ರಗಳ ಅಭಿವೃದ್ಧಿಗಾಗಿ ಸರ್ಕಾರ ಪ್ರತಿ ವರ್ಷ ಹಣವನ್ನು ಬಿಡುಗಡೆಗೊಳಿಸುತ್ತಿದೆಯೆ;

ಆ) ಹಾಗಿದ್ದಲ್ಲಿ, ದಕ್ಷಿಣ ಕನ್ನಡ ಜಿಲ್ಲೆಯ ಮತ್ತು ಉತ್ತರ ಕನ್ನಡ ಜಿಲ್ಲೆಯಲ್ಲಿ ಎಷ್ಟು "ಬೀಚ್"ಗಳನ್ನು ಪ್ರವಾಸಿ ಕೆಂದ್ರಗಳನ್ನಾಗಿ ಗುರುತಿಸಲಾಗಿದೆ; (ವಿವರ ನೀಡುವುದು);

ಇ) ಉಳ್ಳಾಲ ಮತ್ತು ಸೋಮೇಶ್ವರ ಬೀಚ್‌ಗಳ ಅಭಿವೃದ್ಧಿಗಾಗಿ ಸರ್ಕಾರ ಎಷ್ಟು ಹಣವನ್ನು ವೆಚ್ಚ ಮಾಡಿದೆ? (ವಿವರ ನೀಡುವುದು)

ಶ್ರೀ ಜಿ. ಜನಾರ್ಧನ ರೆಡ್ಡಿ (ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಹಾಗೂ ಯುವಜನ ಸೇವೆ ಸಚಿವರು):

ಅ) ಹೌದು.

ಆ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪಣಂಬೂರು, ತಣ್ಣೀರುಭಾವಿ, ಸೂರತ್‌ಕಲ್, ಉಳ್ಳಾಲ ಸೋಮೇಶ್ವರ ಬೀಚ್‌ಗಳನ್ನು ಪ್ರವಾಸಿ ಕೆಂದ್ರಗಳಾಗಿ ಗುರುತಿಸಲಾಗಿದೆ.

ಉತ್ತರ ಕನ್ನಡ ಜಿಲ್ಲೆಯಲ್ಲಿ ದೇವಬಾಗ್, ಟ್ಯಾಗೋರ್, ಕಾಸರಕೋಡು, ಮುರುಡೇಶ್ವರ, ಓಂ ಬೀಚ್ ಮತ್ತು ಗೋಕರ್ಣ ಬೀಚ್‌ಗಳನ್ನು ಪ್ರವಾಸಿ ಕೇಂದ್ರಗಳಾಗಿ ಗುರುತಿಸಲಾಗಿದೆ.

ಇ) ಉಳ್ಳಾಲ ಸೋಮೇಶ್ವರ ಬೀಚ್ ಬಳಿ ವೀಕ್ಷಣಾ ಸ್ಥಳ, ಮೆಟ್ಟಿಲುಗಳು, ರೈಲಿಂಗ್ಸ್, ಲ್ಯಾಂಡ್ ಸ್ಕೇಪಂಗ್, ಪಾಥ್ ದೀಪಗಳ ವ್ಯವಸ್ಥೆ ಹಾಗೂ ವಾಹನ ನಿಲುಗಡೆ ಪ್ರದೇಶ ಮುಂತಾದ ಸೌಲಭ್ಯಗಳನ್ನು ರೂ.76.80 ಲಕ್ಷಗಳಲ್ಲಿ ಅಭಿವೃದ್ಧಿಪಡಿಸುತ್ತಿದ್ದು, ಈಗಾಗಲೇ ರೂ.47.42 ಲಕ್ಷಗಳನ್ನು ಜಿಲ್ಲಾಧಿಕಾರಿಗಳು, ದಕ್ಷಿಣ ಕನ್ನಡ ರವರಿಗೆ ಬಿಡುಗಡೆ ಮಾಡಲಾಗಿದೆ. ಕಾಮಗಾರಿಗಳು ಪ್ರಗತಿಯಲ್ಲಿವೆ.

ಮರಳುಗಾರಿಕೆಯ ಸ್ಪಷ್ಟ ನೀತಿ–ನಿಯಮ ಜಾರಿ

42 (176) ಶ್ರೀ ಖಾದರ್ ಯು.ಟಿ. (ಮಂಗಳೂರು):– ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?